ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	794
ಮಾನ್ಯ ಸದಸ್ಯರ ಹೆಸರು	ಶ್ರೀ ಡಾ: ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು)
ಉತ್ತರಿಸಬೇಕಾದ ದಿನಾಂಕ	17.09.2021
ಉತ್ತರಿಸುವ ಸಚಿವರು	ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ಕರ್ನಾಟಕ ರಾಜ್ಯದಲ್ಲಿನ ವಿಶ್ವವಿದ್ಯಾನಿಲಯಗಳಲ್ಲಿ ಪಿ.ಹೆಚ್.ಡಿ ಸಂಶೋಧನೆ ಕೈಗೊಳ್ಳುತ್ತಿರುವ ವಿದ್ಯಾರ್ಥಿಗಳ ವಿದ್ಯಾರ್ಥಿವೇತನ (Scholarship) 15 ತಿಂಗಳಿನಿಂದ ನೀಡಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಹೌದು, ಅನುದಾನ ಲಭ್ಯತೆಗೆ ಅನುಗುಣವಾಗಿ ವಿದ್ಯಾರ್ಥಿಗಳಿಗೆ ಅವರ ಹಾಜರಾತಿ ಅನ್ವಯ ನಿಯಮಾನುಸಾರ ನವೆಂಬರ್-2020ರ ವರೆಗಿನ ಮಾಸಿಕ ವ್ಯಾಸಂಗ ವೇತನ/ಫೆಲೋಶಿಪ್ ನ್ನು ಈಗಾಗಲೇ ಪಾವತಿಸಲಾಗಿದೆ
ಆ)	ಪಿ.ಹೆಚ್.ಡಿ ಸಂಶೋಧನೆ ಕೈಗೊಳ್ಳುತ್ತಿರುವ ಬಡ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ನೀಡದೆ ವಿನಾಕಾರಣ ಅಧಿಕಾರಿಗಳು/ವಿಶ್ವವಿದ್ಯಾಲಯಗಳು ಸಬೂಬು ಹೇಳುತ್ತಿರುವುದು ನಿಜವೇ;	ಅನ್ವಯಿಸುವುದಿಲ್ಲ.
ಇ)	ಈ ನಿಟ್ಟಿನಲ್ಲಿ ಸರ್ಕಾರವು ಕೈಗೊಂಡ ಕ್ರಮಗಳೇನು?	ಅನುದಾನ ಲಭ್ಯತೆಗೆ ಅನುಗುಣವಾಗಿ ವಿದ್ಯಾರ್ಥಿಗಳಿಗೆ ಅವರ ಹಾಜರಾತಿ ಅನ್ವಯ ನಿಯಮಾನುಸಾರ ನವೆಂಬರ್-2020 ರ ವರೆಗಿನ ಮಾಸಿಕ ವ್ಯಾಸಂಗ ವೇತನ/ಫೆಲೋಶಿಪ್‌ನ್ನು ಈಗಾಗಲೇ ಪಾವತಿಸಲಾಗಿದೆ. 2021-22ನೇ ಸಾಲಿನಲ್ಲಿ ಬಿಡುಗಡೆಯಾಗುವ ಮೂರನೇ ಮತ್ತು ನಾಲ್ಕನೇ ತ್ರೈಮಾಸಿಕ ಕಂತುಗಳ ಅನುದಾನದಲ್ಲಿ ಪಿ.ಹೆಚ್.ಡಿ. ವಿದ್ಯಾರ್ಥಿಗಳಿಗೆ ನಿಯಮಾನುಸಾರ ಬಾಕಿ ವ್ಯಾಸಂಗ ವೇತನ/ಫೆಲೋಶಿಪ್ ನ್ನು ಪಾವತಿಸಲಾಗುವುದು.

ಸಂಖ್ಯೆ:ಹಿಂವಕ 523 ಬಿಂಎಂಎಸ್ 2021

(ಕೋಟ ಶ್ರೀನಿವಾಸ ಪೂಜಾರಿ)
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ